# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಡಾ॥ ರಾಜ್‌ಕುಮಾರ್ ವಾರ್ಡ್ ಸಂಖ್ಯೆ: 106

---

ಸಂ: ಸ.ಅ(ವಾ–106)/ಪಿ.ಆರ್/ 03 /2020–21 ದಿನಾಂಕ: 23/11/2020.

### ವಾರ್ಡ್ ಸಮಿತಿ ಸಭೆಯ ನಡವಳಿ

ದಿನಾಂಕ: 23–11–2020 ರಂದು ವಾರ್ಡ್ ಸಂಖ್ಯೆ: 106 ಡಾ॥ ರಾಜ್‌ಕುಮಾರ್ ವಾರ್ಡ್ ನಲ್ಲಿ ಶ್ರೀಮತಿ. ಗೀತಾ ಎಲ್. ವಾರ್ಡ್ ನಂ. 106ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ

**ಹಾಜರಿದ್ದ ಅಧಿಕಾರಿ / ನೌಕರರು:–**

1) ಶ್ರೀಮತಿ. ಗೀತಾ. ಎಲ್, ನೋಡಲ್ ಅಧಿಕಾರಿಗಳು
2) ಶ್ರೀ. ಅರುಣ್‌ಕುಮಾರ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ ವಾರ್ಡ್ ನಂ. 106
3) ನಾಗರಾಜ್. ಕೆ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ
4) ಮುರಳಿ ಮೋಹನ್, ಕಂದಾಯ ವಸೂಲಿಗಾರರು
5) ಅವಿನಾಶ್ ಎಸ್, ಆರೋಗ್ಯ ಪರಿವೀಕ್ಷಕರು
6) ರಾಜೇಶ್, ಆರೋಗ್ಯ ಪರಿವೀಕ್ಷಕರು
7) ಆನಂದ್, ಹೆಚ್.ವಿ, ಸಹಾಯಕ ಅಭಿಯಂತರರು, ಬೆಸ್ಕಾಂ
8) ಚಂದ್ರಶೇಖರ್, ಸಹಾಯಕ ಅಭಿಯಂತರರು, ಬೆಸ್ಕಾಂ
9) ಸುಧಾ ಎನ್. ಆರ್. ಪಿ.ಎಸ್.ಐ ಮಾಗಡಿ ರಸ್ತೆ ಪೋಲೀಸ್ ಠಾಣೆ
10) ಬಿ. ಉಮೇಶ್, ಕಸ ಸಂಗ್ರಹಣೆ ಗುತ್ತಿಗೆದಾರರು

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಸ್ವಚ್ಛತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ:– ವಾರ್ಡ್‌ನಲ್ಲಿ ಕಸ ವಿಂಗಡಣೆ ಹಾಗೂ ಶೇಖರಣೆಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಮಾನ್ಯ ಅಧ್ಯಕ್ಷರು ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಿದರು ಹಾಗೂ ಕಸವಿಲೇವಾರಿ ಮಾಡದಿರುವ ಸಾರ್ವಜನಿಕರಿಗೆ ದಂಡ ವಿಧಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದರು.
- ವಾರ್ಡ್‌ನ ಎಲ್ಲಾ ರಸ್ತೆಗಳಲ್ಲಿ ರಸ್ತೆ ದೀಪಗಳನ್ನು ಸಮರ್ಪಕವಾಗಿ ನಿರ್ವಹಿಸಲು ಮಾನ್ಯ ಅಧ್ಯಕ್ಷರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.
- ಮಾಸ್ಕ್ ದರಿಸದ ಸಾರ್ವಜನಿಕರಿಗೆ ದಂಡ ವಿಧಿಸುವುದು ಹಾಗೂ ಮಾಸ್ಕ್ ದರಿಸುವಂತೆ ಮತ್ತು ಸಾಮಾಜಿಕ ಅಂತರ ಕಾಪಾಡಿಕೊಳ್ಳಲು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸವನ್ನು ಲಿಂಕ್ ವರ್ಕರ್‌ಗಳು ಕೈಗೊಳ್ಳಲು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ಸಭೆಯಲ್ಲಿ ಈ ಹಿಂದಿನ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ಚರ್ಚಿಸಲಾಯಿತು.
- ರಾಜಾಜಿನಗರ ಕೈಗಾರಿಕಾನಗರ, 4ನೇ ಮುಖ್ಯರಸ್ತೆ, ಗಾಯತ್ರಿ ಭವನದ ಸರ್ಕಲ್ ಎದುರು ಬಿಡಬ್ಲ್ಯೂಎಸ್‌ಎಸ್‌ಬಿ ಮ್ಯಾನ್‌ಹೋಲ್‌ನಿಂದ ರಸ್ತೆ ಕುಸಿದು ಆಳವಾದ ಗುಂಡಿಯಾಗಿರುತ್ತದೆ. ಇದನ್ನು ಶೀಘ್ರವಾಗಿ ಸರಿಪಡಿಸಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

Scanned with CamScanner

- ವೆಸ್ಟ್ ಆಫ್ ಕಾರ್ಡ್‌ರಸ್ತೆಯ ಫ್ಲೈಓವರ್ ಕಾಮಗಾರಿಯು ಪ್ರಗತಿಯಲ್ಲಿದ್ದು, ಶೀಘ್ರವಾಗಿ ಪೂರ್ಣಗೊಳಿಸಲು ವಾರ್ಡ್‌ನ ಸದಸ್ಯರುಗಳು ತಿಳಿಸಿರುತ್ತಾರೆ. ಮಾನ್ಯ ಅಧ್ಯಕ್ಷರು ಬಿಬಿಎಂಪಿ ಯೋಜನಾಧಿಕಾರಿಗಳಿಗೆ ತಿಳಿಸುವುದಾಗಿ ಸೂಚಿಸಿದರು.
- ಬಸವೇಶ್ವರನಗರ 1ನೇ ಮುಖ್ಯರಸ್ತೆಯಲ್ಲಿ ಬಸ್ ಶೆಲ್ಟರ್ ನಿರ್ಮಿಸಿಕೊಡಬೇಕೆಂದು ಜಿ.ಇ.ಎಫ್ ಬ್ಲಾಕ್‌ನ ನಿವಾಸಿಗಳು ತಿಳಿಸಿದ್ದು, ಮಾನ್ಯ ಅಧ್ಯಕ್ಷರು ಟಿ.ಇ.ಸಿ. ಬಿಬಿಎಂಪಿ ರವರ ಗಮನಕ್ಕೆ ತರುವುದಾಗಿ ತಿಳಿಸಿದರು.
- ಬೋರ್‌ವೆಲ್ ಪೈಪ್ ಲೈನ್ ಜೋಡಣೆಗಳನ್ನು ದುರಸ್ಥಿ ಮಾಡುವಂತೆ ವಾರ್ಡ್ ಸದಸ್ಯರು ತಿಳಿಸಿದ್ದು, ಶೀಘ್ರವಾಗಿ ಸರಿಪಡಿಸುವುದಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.
- ವಾರ್ಡ್‌ನ ಎಲ್ಲಾ ಮುಖ್ಯರಸ್ತೆಗಳಿಗೆ ಎಸ್.ಎಸ್. ಬೋರ್ಡ್‌ಗಳನ್ನು ಅಳವಡಿಸುವಂತೆ ವಾರ್ಡ್ ಸದಸ್ಯರುಗಳು ತಿಳಿಸಿದ್ದು, ಇದಕ್ಕೆ ಉತ್ತಿರಿಸಿದ ವಾರ್ಡ್ ಇಂಜಿನಿಯರ್ ಈಗಾಗಲೇ ಟೆಂಡರ್ ಕರೆದಿದ್ದು, ಶೀಘ್ರವಾಗಿ ಕಾಮಗಾರಿಯನ್ನು ಕೈಗೊಳ್ಳಲಾಗುವುದೆಂದು ತಿಳಿಸಿದರು.
- ರಾಜಾಜಿನಗರ ಇಂಡಸ್ಟ್ರಿಯಲ್ ಟೌನ್ 3ನೇ ಮುಖ್ಯರಸ್ತೆಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಸದಸ್ಯರುಗಳು ತಿಳಿಸಿದ್ದು, ಕೂಡಲೇ ಕ್ರಮಕೈಗೊಳ್ಳಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರು ಕುಂದು ಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುಲು ಸೂಚಿಸಿ ಮುಂದಿನ ಸಭೆಗೆ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಹಾಜರಿರಲು ತಿಳಿಸಿ ಸಭೆಯನ್ನು ಮುಕ್ತಾಯ ಮಾಡಿದರು.

23/11/2020

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 106 ಡಾ॥ ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/11/2020

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ನಂ. 106 ಡಾ॥ ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ

Scanned with CamScanner